ರೂ 28 46 ಲಕ್ಷ ಮತ್ತು ರೂ 21 98 ಲಕ್ಷಗಳನ್ನು ಮರು ಪಾವತಿಸಲಾಗಿದೆ ಸರ್ಕಾರಕ್ಕೆ ಪಾವತಿಸಬೇಕಾದ ಸಾಲ ಮತ್ತು ಬಡ್ಡಿ ಬಾಬ್ತು 2004–05, 2005–06 ಮತ್ತು 2006–07ನೇ ಸಾಲುಗಳಲ್ಲಿ ಮರುಪಾವತಿ ಮಾಡಿರುವುದಿಲ್ಲ

ಆ) ಈ ಮಹಾಮಂಡಳಿಯಿಂದ 31–03–2006ರ ಅಂತ್ಯಕ್ಕೆ ಸರ್ಕಾರಕ್ಕೆ ರೂ 54 32 ಲಕ್ಷ ಸಾಲ ಮತ್ತು ರೂ 159 23 ಲಕ್ಷ ಬಡ್ಡಿ ಮತ್ತು ದಂಡನಾ ಬಡ್ಡಿ ಒಟ್ಟು 213 55 ಲಕ್ಷಗಳು ಪಾವತಿಸಲು ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೇ

ಇ) ಸರ್ಕಾರಕ್ಕೆ ಪಾವತಿಸಲು ಬಾಕಿ ಇರುವ ಸಾಲ ಮತ್ತು ಬಡ್ಡಿಯನ್ನು ಪಾವತಿಸುವಂತೆ ಮಹಾಮಂಡಳಿಗೆ ಸೂಚಿಸಲಾಗಿದೆ

119 (252) ಶ್ರೀ ಗೋಪಾಲ ಪೂಜಾರಿ ಕೆ (ಬೈಂದೂರು) ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ಸರ್ಕಾರದಿಂದ ಅರ್ಹ ಫಲಾನುಭವಿಗಳಿಗೆ ತಾತ್ಕಾಲಿಕ ಪಡಿತರ ಚೀಟಿ ವಿತರಿಸಿ 6 ತಿಂಗಳು ಕಳೆದರೂ ಈವರೆಗೆ ನೀಡಿದ ತಾತ್ಕಾಲಿಕ ಪಡಿತರ ಚೀಟಿಯಲ್ಲಿರುವ ಕುಂದು ಕೊರತೆಗಳನ್ನು ಸರಿಪಡಿಸಿ ಖಾಯಂ ಪಡಿತರ ಚೀಟಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಆ) ಹಾಗಿದ್ದಲ್ಲಿ, ಖಾಯಂ ಪಡಿತರ ಚೀಟಿಯನ್ನು ಯಾವಾಗ – ವಿತರಣೆ ಮಾಡಲಾಗುವುದು ,

ಇ) ಬಡತನ ರೇಖೆಯಿಂದ ಮೇಲಿರುವ ನಾಗರೀಕರ ಪಡಿತರ ಚೀಟಿಗೆ ಹಿಂದೆ ನೀಡಲಾಗುತ್ತಿದ್ದ ಸೀಮೆಎಣ್ಣೆ ಸೌಲಭ್ಯವನ್ನು ರದ್ದುಪಡಿಸಿದ್ದರಿಂದ ರಾತ್ರಿ ವೇಳೆಯಲ್ಲಿ ವಿದ್ಯುತ್ ಕಡಿತ ಹಾಗೂ ಇತರೆ ಕಾರಣಗಳಿಂದ ರಾತ್ರಿ ವೇಳೆ ವಿದ್ಯುತ್ ಇಲ್ಲದೇ ಇದ್ದಾಗ ಇಂತಹವರಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರಕ್ಕೆ ತಿಳಿದಿದೆಯೇ ,

ಈ) ಇಂತಹವರಿಗೆ ಕನಿಷ್ಟ 3 ಲೀಟರ್ ಸೀಮೆಎಣ್ಣೆ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ (ವಿವರ ನೀಡುವುದು) ?

ಶ್ರೀ ಗೋವಿಂದ ಎಂ ಕಾರಜೋಳ (ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು)

ಅ) ಹೌದು

ಆ) ಲೋಪದೋಷಗಳ ಬಗ್ಗೆ ಸಾರ್ವಜನಿಕರಿಂದ ಸ್ವೀಕರಿಸಿರುವ ಅಹವಾಲುಗಳನ್ನು ಪೂರ್ಣಪ್ರಮಾಣದಲ್ಲಿ ವಿಲೇವಾರಿಗೊಳಿಸಿ, ಖಾಯಂ ಪಡಿತರ ಚೀಟಿ ವಿತರಣೆಗೆ ಕ್ರಮ ವಹಿಸಲಾಗುವುದು ಇದಕ್ಕೆ 6 ತಿಂಗಳ ಕಾಲಾವಕಾಶದಲ್ಲಿ ಕ್ರಮವಹಿಸಲಾಗುವುದು

ಇ) ಅಡುಗೆ ಅನಿಲ ಸಂಪರ್ಕ ಹೊಂದಿರದ ಎಲ್ಲಾ ವರ್ಗದ ಪಡಿತರ ಚೀಟಿದಾರರಿಗೆ ಸೀಮೆಎಣ್ಣೆಯನ್ನು ವಿತರಿಸಲಾಗುತ್ತಿದೆ

ಈ) ಅನಿಲ ಸಂಪರ್ಕ ಹೊಂದಿದವರಿಗೆ ಸೀಮೆಎಣ್ಣೆ ವಿತರಿಸಲು ಸಾಧ್ಯವಾಗುವುದಿಲ್ಲ

120 (253) ಶ್ರೀ ಗೋಪಾಲ ಪೂಜಾರಿ ಕೆ (ಬೈಂದೂರು) ಮಾನ್ಯ ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ಸರ್ಕಾರದ ಅನ್ನಪೂರ್ಣ ಯೋಜನೆಯಲ್ಲಿ ಕಡುಬಡವರಿಗೆ 10 ಕೆಜಿ ಅಕ್ಕಿ ಧರ್ಮಾಧೇ ನೀಡಲಾಗುತ್ತಿದ್ದ ಈ ಯೋಜನೆಯನ್ನು ಈಗ ಕೈಬಿಡಲಾಗಿರುವುದು ನಿಜವೇ ,

ಆ) ಇಂತಹ ಜನಹಿತ ಕಾರ್ಯಕ್ರಮ ನಿಲ್ಲಿಸಲು ಕಾರಣವೇನು ,

ಇ) ಈ ಯೋಜನೆಯನ್ನು ಪುನಃ ಜಾರಿಗೆ ತರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

ಶ್ರೀ ಗೋವಿಂದ ಎಂ ಕಾರಜೋಳ (ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು)

ಅ) ಇಲ್ಲ

ಆ) ಅನ್ವಯಿಸುವುದಿಲ್ಲ

ಇ) ಅನ್ನಪೂರ್ಣ ಯೋಜನೆಯಡಿ 25,452 ಫಲಾನುಭವಿಗಳಿಗೆ ತಾತ್ಕಾಲಿಕ ಪಡಿತರ ಕೂಪನ್‌ಗಳನ್ನು ವಿತರಿಸಲಾಗಿದೆ ಈ ಎಲ್ಲಾ ಫಲಾನುಭವಿಗಳಿಗೆ 10 ಕೆಜಿ ಅಕ್ಕಿ ಉಚಿತವಾಗಿ ನೀಡಲಾಗುವುದು ಇದಕ್ಕೆ ಸಂಬಂಧಿಸಿದಂತೆ ಆಡಳಿತಾತ್ಮಕ ವೆಚ್ಚವನ್ನು ಭರಿಸಲು ಸರ್ಕಾರಿ ಆದೇಶ ಸಂಖ್ಯೆ ಕಂಇ 16 ಎಂಎಸ್‌ಟಿ 2006(1), ದಿನಾಂಕ 25 1 2007 ರನ್ವಯ ರೂ 77 51 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ